ಕರ್ನಾಟಕ ಸರ್ಕಾರ (ಸಿ.ಆರ್.ಪಿ. 67)

| ಹೇಳಿಕೆ ಹಾಳೆ<br>(ಆರ್.ಪಿ. ಸಂಖ್ಯೆ 57)<br>ನಮೂನೆ ಸಂಖ್ಯೆ 4<br>(ಸಿವಿಲ್) |
|---|

ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ.ದಂ. ಹಳಿಯಾಳ
ಇವರ ನ್ಯಾಯಾಲಯದಲ್ಲಿ.

ಸಿ.ಸಿ. ನಂ.: 45/2025

........................................................................

CW 13
PW 07

ಹೆಸರು : ಸುರೇಶ ಗೌಡಾ
ತಂದೆಯ ಹೆಸರು : ಯಲ್ಲಾರಿ
ವಯಸ್ಸು : 49 ವರ್ಷ
ಉದ್ಯೋಗ : ಮುಖ್ಯ ಪೇದೆ, ಕಾರವಾರ ಶಹರ ಪೊಲೀಸ ಠಾಣೆ,
ವಾಸಸ್ಥಳ : ಕಾರವಾರ.

ದಿನಾಂಕ 20-01-2026 ರಂದು ಸತ್ಯಪ್ರತಿಜ್ಞೆ ಮೇಲೆ ಪ್ರಮಾಣವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ**: ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ :

ದಿನಾಂಕ 30-07-2018 ರಿಂದ ದಿನಾಂಕ 30-06-2025 ರ ವರೆಗೆ ಹಳಿಯಾಳ ಪೊಲೀಸ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 31-10-2024 ರಂದು ನಾನ ಠಾಣಾ ಪ್ರಭಾರದಲ್ಲಿ ಇದ್ದಾಗ ತಾಲೂಕಾ ಆಸ್ಪತ್ರೆ ಹಳಿಯಾಳದಿಂದ ಎಮ್ ಎಲ್ ಸಿ ಆದ ಬಗ್ಗೆ ಮಾಹಿತಿ ಬಂದಿದ್ದು, ಹಳಿಯಾಳ ಸರ್ಕಾರಿ ಆಸ್ಪತ್ರೆಗೆ ನಾನು ಮತ್ತು ಚಾಸಾ 10 ರವರನ್ನು ಭೇಟಿ ನೀಡಿ ಕರ್ತವ್ಯ ನಿರತ ವೈದ್ಯಾಧಿಕಾರಿಗಳನ್ನು ಭೇಟಿ ಮಾಡಿ ಅಪಘಾತದಲ್ಲಿ ಗಾಯಗೊಂಡ ಚಾಸಾ 1 ರವರು ಹೇಳಿಕೆ ನೀಡುವ ಸ್ಥಿತಿಯಲ್ಲಿ ಇದ್ದಾರೆಯೇ ಎಂದು ಅಭಿಪ್ರಾಯ ಪಡೆದು, ಚಾಸಾ 1 ರವರು ಹೇಳಿಕೆ ನೀಡುವ ಸ್ಥಿತಿಯಲ್ಲಿ ಇದ್ದಾರೆ ಎಂದು ಖಚಿತ ಪಡಿಸಿಕುಂಡು ಚಾಸಾ 1 ರವರಿಂದ ಹೇಳಿಕೆ ದೂರನ್ನು ಪಡೆದಿರುತ್ತೇನೆ. ಸದರಿ ದೂರನ್ನ ನೋಡಿದರೆ ಗುರುತಿಸುತ್ತೇನೆ. ಸಾಕ್ಷಿ ನಿಪಿ 1 ರಲ್ಲಿರುವ ತಮ್ಮ ಸಹಿಯನ್ನು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು **ನಿಪಿ 1 ಬಿ ಎಂದು** ಗುರುತಿಸಲಾಯಿತು. ನಂತರ ಠಾಣೆಗೆ ಬಂದು ಪ್ರ.ವ.ವ ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಸದರಿ ಪ್ರ.ವ.ವ ಅನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿ ಗುರುತಿಸಿದ ಮೇರೆಗೆ ಪ್ರ.ವ.ವ ಅನ್ನು **ನಿಪಿ 14 ಎಂದು,** ಸಾಕ್ಷಿಯ ಸಹಿಯನ್ನು **ನಿಪಿ 14 ಎ ಎಂದು** ಗುರುತಿಸಲಾಯಿತು.

ನಂತರ ಚಾಸಾ 4 ಮತ್ತು 5 ರವರಿಗೆ ನೋಟೀಸ್ ನೀಡಿ ವಿಚಾರಣೆಗೆ ಹಾಜರಾಗುವಂತೆ ತಿಳಿಸಿರುತ್ತೇನೆ. ದಿನಾಂಕ 01-11-2024 ರಂದು ಚಾಸಾ 4 ರವರು ತೋರಿಸಿದ ಜಾಗದಲ್ಲಿಲ ಚಾಸಾ 2 ಮತ್ತು 3 ರವರ ಸಮಕ್ಷಮ ಘಟನಾ ಜಾಗದ ಪಂಚನಾಮೆಯನ್ನು ಬೆಳಗ್ಗೆ 10-15 ರಿಂದ 11-15 ರವರೆಗೆ ಜರುಗಿಸಿ, ಕಚ್ಚಾ ನಕಾಶೆಯನ್ನು ತಯಾರಿಸಿ, ಭಾವಚಿತ್ರವನ್ನು ತೆಗೆದಿರುತ್ತೇನೆ. ಸದರಿ ಘಟನಾ ಜಾಗದ ಪಂಚನಾಮೆಯನ್ನು ಈಗಾಗಲೇ ನಿಪಿ 3 ಎಂದು ಗುರುತಿಸಲಾಗಿದು, ಸಾಕ್ಷಿಯ ಸಹಿಯನ್ನು **ನಿಪಿ 3 ಡಿ ಎಂದು** ಗುರುತಿಸಲಾಯಿತು. ಕಚ್ಚಾ ನಕಾಶೆಯನ್ನು ಈಗಾಗಲೇ ನಿಪಿ 4 ಎಂದು ಗುರುತಿಸಲಾಗಿದು, ಸಾಕ್ಷಿಯ ಸಹಿಯನ್ನು ನಿಪಿ 4 ಬಿ ಎಂದು ಗುರುತಿಸಲಾಯಿತು. ಆ ಸಮಯದಲ್ಲಿ ತೆಗೆದ ಭಾವಚಿತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ 2 ಎಂದು ಗುರುತಿಸಲಾಗಿದೆ.

ಅದೇ ದಿನ ಚಾಸಾ 2 ಮತ್ತು 3 ರವರ ಸಮಕ್ಷಮ ಚಾಸಾ 4 ರವರು ತೋರಿಸಿದ ವಾಹನವನ್ನು ಜಪ್ತುಪಡಿಸಿ ಪಂಚನಾಮೆಯನ್ನು ಬೆಳಗ್ಗೆ 11-25 ರಿಂದ 12-30 ರ ವರೆಗೆ ಜರುಗಿಸಿ, ಭಾವಚಿತ್ರವನ್ನು ತೆಗೆದಿರುತ್ತೇನೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿ 6 ಎಂದು ಗುರುತಿಸಲಾಗಿದು, ಸಾಕ್ಷಿಯ ಸಹಿಯನ್ನು **ನಿಪಿ 6 ಡಿ ಎಂದು** ಗುರುತಿಸಲಾಯಿತು. ಆ ಸಮಯದಲ್ಲಿ ತೆಗೆದ ಭಾವಚಿತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ 5 ಎಂದು ಗುರುತಿಸಲಾಗಿದೆ.

ನಂತರ ಈ ಪ್ರಕರಣದ ಆರೋಪಿ ಬಸ್ ಚಾಲಕನಿಗೆ ಕಲಂ 41 ಎ ರಡಿಯಲ್ಲಿ ನೋಟೀಸ್ ನೀಡಿ ದಸ್ತಗೀರ್ ನಿಯಮ ಪಾಲಿಸಿರುತ್ತೇನೆ.

ಅದೇ ರೀತಿ 133 ರಡಿಯಲ್ಲಿ ಕೆ ಎಸ್ ಆರ್ ಟಿ ಸಿ ಡಿಪೋ ಮ್ಯಾನೇಜರ್ ರವರಿಗೆ ನೊಟೀಸ ನೀಡಿ ವಿವರಣೆಯನ್ನು ಪಡೆದಿರುತ್ತೇನೆ. ಸದರಿ ನೊಟೀಸ್ ಅನ್ನು ಸಾಕ್ಷಿ ನೋಡಿ ಗುರುತಿಸಿದ್ದರಿಂದ ನೊಟೀಸ ಅನ್ನು ಈಗಾಗಲೇ ನಿಪಿ 11 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು **ನಿಪಿ 11 ಬಿ ಎಂದು** ಗುರುತಿಸಲಾಯಿತು. ಕೆ ಎಸ್ ಆರ್ ಟಿ ಸಿ ಡಿಪೋ ಮ್ಯಾನೇಜರ್ ರವರಿಂದ ಪಡೆದ ಉತ್ತರವನ್ನು ಈಗಾಗಲೇ ನಿಪಿ 12 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು **ನಿಪಿ12 ಬಿ ಎಂದು** ಗುರುತಿಸಲಾಯಿತು. ಆ ಸಮಯದಲ್ಲಿ ಕೆ ಎಸ್ ಆರ್ ಟಿ ಸಿ ಡಿಪೋ ಮ್ಯಾನೇಜರ್ ರವರು ಬಾಂಡ್ ಪತ್ರವನ್ನು ಬರೆದುಕೊಟ್ಟಿರುತ್ತಾರೆ. ಅದನ್ನು ಸಾಕ್ಷಿ ನೋಡಿ ಗುರುತಿಸಿದ ಮೇರೆಗೆ ಅದನ್ನು ಈಗಾಗಲೇ ನಿಪಿ 13 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು **ನಿಪಿ13 ಬಿ ಎಂದು** ಗುರುತಿಸಲಾಯಿತು.

ದಿನಾಂಕ 07-11-2024 ರಂದು ವರದಿ ತಯಾರಿಸಿ Claim Tribunal ಗೆ ಸಲ್ಲಿಸಿರುತ್ತೇನೆ.

ದಿನಾಂಕ 05-11-2024 ರಂದು ಕೆ ಎಸ್ ಆರ್ ಟಿ ಸಿ ವ್ಯವಸ್ಥಾಪಕರಿಂದ ದೃಢೀಕರಣ ಪತ್ರವನ್ನು ಸ್ವೀಕರಿಸಿ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ಪತ್ರವನ್ನು ದೃಢೀಕರಣ ಪತ್ರವನ್ನು ನೋಡಿ ಗುರುತಿಸಿದ್ದರಿಂದ ಅದನ್ನು **ನಿಪಿ 15 ಎಂದು,** ಸಾಕ್ಷಿಯ ಸಹಿಯನ್ನು **ನಿಪಿ 15 ಎ ಎಂದು** ಗುರುತಿಸಲಾಯಿತು.

ನಂತರ ಮೋಟಾರ ಸೈಕಲ್ ನಂಬರ ಕೆಎ-25-ಎಚ್ ಜೆ-2647 ನೇದ್ದರ ಮಾಲೀಕರಿಂದ ಬಾಂಡ್ ಪತ್ರವನ್ನು ಪಡೆದು ಬಿಡುಗಡೆ ಮಾಡಿರುತ್ತೇನೆ. ಸದರಿ ಬಾಂಡ್ ಪತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದರಿಂದ ಅದನ್ನು **ನಿಪಿ 16 ಎಂದು,** ಸಾಕ್ಷಿಯ ಸಹಿಯನ್ನು **ನಿಪಿ 16 ಎ ಎಂದು** ಗುರುತಿಸಲಾಯಿತು.

ದಿನಾಂಕ 07-11-2024 ರಂದು ವಾಹನದ ವರದಿಯನ್ನು ಪಡೆದು ಕಡತಕ್ಕೆ ಅಳವಸಿಡಿಕೊಂಡಿರುತ್ತೇನೆ. ಐ ಎಮ್ ವಿ ವರದಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದರಿಂದ ಅದನ್ನು **ನಿಪಿ 17 ಎಂದು** ಸಾಕ್ಷಿಯ ಸಹಿಯನ್ನು **ನಿಪಿ 17 ಎ ಎಂದು** ಗುರುತಿಸಲಾಯಿತು.

ನಂತರ ಚಾಸಾ 1 ರವರ ಗಾಯದ ಪ್ರಮಾಣ ಪತ್ರವನ್ನು ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಗಾಯದ ಪ್ರಮಾಣ ಪತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದರಿಂದ ಅದನ್ನು **ನಿಪಿ 18 ಎಂದು** ಸಾಕ್ಷಿಯ ಸಹಿಯನ್ನು **ನಿಪಿ 18 ಎ ಎಂದು** ಗುರುತಿಸಲಾಯಿತು.

ಅದೇ ರೀತಿ ಚಾಸಾ 10 ರವರಿಂದ ಸಿಡಿ ಮತ್ತು ಕಲಂ 65 ಬಿ ರಡಿಯಲ್ಲಿ ಪ್ರಮಾಣ ಪತ್ರ ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿ ಗುರುತಿಸಿದ ಮೇರೆಗೆ ಸಿಡಿಯನ್ನು **ನಿಪಿ 19 ಎಂದು,** ಪ್ರಮಾಣ ಪತ್ರವನ್ನು **ನಿಪಿ 20 ಎಂದು,** ಸಾಕ್ಷಿಯ ಸಹಿಯನ್ನು **ನಿಪಿ 20 ಎ ಎಂದು** ಗುರುತಿಸಲಾಯಿತು.

ನಂತರ ಚಾಸಾ 4 ರಿಂದ 8, 9 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ.

ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಆತನು ಈಗ ನ್ಯಾಯಾಲಯದ ಮುಂದೆ ಗೈರು ಹಾಜರು ಇದ್ದ ಕಾರಣ ಆತನನ್ನು ಗುರುತಿಸುವಿಕೆಯ ಬಗ್ಗೆ ಆತನ ಪರ ವಕೀಲರ ಯಾವುದೇ ತಕರಾರು ಇರುವುದಿಲ್ಲ ಎಂದು ತಿಳಿಸಿರುತ್ತಾರೆ. ಜಪ್ತುಪಡಿಸಿಕೊಂಡ ವಾಹನಗಳನ್ನು ನೋಡಿದರೆ ಗುರುತಿಸುತ್ತೇನೆ.

ದಿನಾಂಕ 31-12-2024 ತನಿಖೆ ಪೂರೈಸಿ ಆರೋಪಿಯ ವಿರುದ್ಧ ಸಾಕಷ್ಟು ಸಾಕ್ಷ್ಯಾಧಾರಗಳು ಲಭಿಸಿದ್ದರಿಂದ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿಯನ್ನು ನಿವೇದಿಸಿಕೊಂಡಿರುತ್ತೇನೆ.

**ಪಾಟೀ ಸವಾಲುಃ** ಆರೋಪಿಯ ಪರ ಶ್ರೀ ಎಸ್ ಎಲ್ ಎಸ್ ವಕೀಲರಿಂದ.

ರಸ್ತೆ ಅಪಘಾತವಾದ ಬಗ್ಗೆ ಹಳಿಯಾಳ ಸರ್ಕಾರಿ ಆಸ್ಪತ್ರೆಯಿಂದ ಯಾವುದೇ ಮಾಹಿತಿ ಪಡೆದಿಲ್ಲ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿರುವ ಎಲ್ಲಾ ವಿಚಾರಗಳು ಸುಳ್ಳು ಎಂದರೆ ಸರಿಯಲ್ಲ. ಚಾಸಾ 10 ರವರು ನಿಮ್ಮ ಅನುಕೂಲಕ್ಕೆ ತಕ್ಕಂತೆ ಪ್ರಮಾಣ ಪತ್ರ ಮತ್ತು ಸಿಡಿಯನ್ನು ತಯಾರಿಸಿ ಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ಚಾಸಾ 8 ರವರಿಗೆ ಕಲಂ 133 ರಡಿಯಲ್ಲಿ ನೊಟೀಸ ನೀಡಿಲ್ಲ ಎಂದರೆ ಸರಿಯಲ್ಲ. ಚಾಸಾ 4 ರಿಂದ 8 ರವರ ಹೇಳಿಕೆಗಳನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ಆರೋಪಿತನಿಂದ ಯಾವುದೇ ತಪ್ಪು ಕಂಡು ಬರದಿದ್ದರೂ ಸಹ ಆತನ ವಿರುದ್ಧ ಸುಳ್ಳು ದೋಷಾರೋಪಣಾ ಪತ್ರವನ್ನು ಸಲ್ಲಿಸಿರುತ್ತೀರಿ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

ಓ.ಹೇ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾದಂ. ಹಳಿಯಾಳ